PW-1 ಓಬಮ್ಮ

Date:27.02.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಅಸಲು ದಾವೆ 76/2014 ರ ದಾವಾ ಪತ್ರದ, ಮೂರು ಪ್ರತಿವಾದ ಪತ್ರದ ಮತ್ತು ವಿವಾದ ಅಂಶದ ದೃಡಿಕರಿಸಿದ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 1 ರಿಂದ 5 ಎಂದು ಗುರುತಿಸಲಾಯಿತು. ಸದರಿ ದಾವೆಯಲ್ಲಿ ಗುರುತಿಸಲ್ಪಟ್ಟ ನಿಪಿ 1 ರಿಂದ 18 ಗಳನ್ನು ಕ್ರಮವಾಗಿ ನಿಪಿ 6 ರಿಂದ 23 ಎಂದು ಗುರುತಿಸಲಾಯಿತು. ಸದರಿ ದಾವೆಯಲ್ಲಿ ಗುರುತಿಸಲಾದ ನಿಪಿ 1 ರಿಂದ 6 ಗಳನ್ನು ಕ್ರಮವಾಗಿ ನಿಪಿ 24 ರಿಂದ 29 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಪ್ರತಿವಾದಿಗಳು ಯಾವುದೇ ಯಾವುದೇ ಪ್ರತಿವಾದ ಪತ್ರವನ್ನು ಸಲ್ಲಿಸಿರದ ಕಾರಣ ಕಾಲಾವಕಾಶ ನೀಡಲು ಯಾವುದೇ ಸಮಂಜಸ ಕಾರಣ ಇರುವುದಿಲ್ಲ. ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ